# CALENDER FOR EVENTS

ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರ ನೇಮಕಾತಿ ಪ್ರಕ್ರಿಯೆಯನ್ನು ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲು ಈ ಕೆಳಕಂಡಂತೆ ಕ್ರಮವಹಿಸಲಾಗಿದೆ.

| Website ವಿಳಾಸ: www.anganwadirecruit.kar.nic.in | | |
|---|---|---|
| ತಾತ್ಕಾಲಿಕ ವೇಳಾ ಪಟ್ಟಿ | | |
| ವಿವರಣೆ | ದಿನಗಳು | ದಿನಾಂಕ |
| ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಪ್ರಾರಂಭದ ದಿನಾಂಕ | – | 25.09.2018 ಬೆಳಿಗ್ಗೆ 10.00 ಗಂಟೆಯಿಂದ |
| ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | 30 ದಿನಗಳು | 24.10.2018 ಸಂಜೆ 5.30 ಗಂಟೆವರೆಗೆ |
| ಆಯ್ಕೆ ಸಮಿತಿ ಸದಸ್ಯರು ಹಾಗೂ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಿಂದ ಎನ್.ಐ.ಸಿ ಯಲ್ಲಿ ಸ್ವೀಕರಿಸಲಾದ ಅರ್ಜಿಗಳ ಪರಿಶೀಲನೆ | 1 ದಿನ | 25.10.2018 |
| ಅರ್ಹರಾದ ಅಭ್ಯರ್ಥಿಗಳ ಪಟ್ಟಿಯನ್ನು ಆಯ್ಕೆ ಸಮಿತಿಯಿಂದ ಅನುಮೋದನೆ ಪಡೆಯುವುದು | 1 ದಿನ | 26.10.2018 |
| ಆಯ್ಕೆಯಾದ ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟಣೆ ಹಾಗೂ ಸಾರ್ವಜನಿಕ ಆಕ್ಷೇಪಣೆ ಸಲ್ಲಿಸುವಿಕೆ ಕಾಲಾವಕಾಶ | 7 ದಿನಗಳು | 26.10.2018 ರಿಂದ 02.11.2018 |
| ಆಕ್ಷೇಪಣೆ ಬಂದ ಅಭ್ಯರ್ಥಿಗಳ ದಾಖಲಾತಿ ಪರಿಶೀಲನೆ | 1 ದಿನ | 03.11.2018 |
| ಪರಿಶೀಲನೆ ನಂತರ ಆಯ್ಕೆ ಸಮಿತಿಯ ಸಭೆ ನಡೆಸಿ ಅಂತಿಮ ಪಟ್ಟಿಗೆ ಅನುಮೋದನೆ ಪಡೆಯುವುದು | 1 ದಿನ | 05.11.2018 |

ಉಪನಿರ್ದೇಶಕರು
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
ದ.ಕ.ಜಿಲ್ಲೆ., ಮಂಗಳೂರು

ಕರ್ನಾಟಕ ಸರ್ಕಾರ

ಉಪನಿರ್ದೇಶಕರ ಕಛೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
ಜಿಲ್ಲಾ ಪಂಚಾಯತ್ ಸಂಕೀರ್ಣ, ನೆಲಮಹಡಿ, ಅಶೋಕನಗರ ಅಂಚೆ, ಕೊಟ್ಟಾರ,
ಮಂಗಳೂರು, ದ.ಕ.ಜಿಲ್ಲೆ– 575006

ಇ–ಮೇಲ್ ವಿಳಾಸ: wcddept@gmail.com ದೂರವಾಣಿ: 0824–2453071, 2451254

ಸಂಖ್ಯೆ: ಉನಿಮ/ಮಮಅಇ/ಅಂ.ಕಾ.ನೇ/ಆನ್‌ಲೈನ್/2018–19/ಎ3 ದಿನಾಂಕ: 20.09.2018

# ಅಧಿಸೂಚನೆ

ಸರ್ಕಾರದ ಆದೇಶ ಸಂಖ್ಯೆ: ಮಮಇ 303 ಐಸಿಡಿ 2017 ದಿನಾಂಕ: 23.09.2017 ರ ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿ ನೇಮಕಾತಿಯ ಪರಿಷ್ಕೃತ ಮಾರ್ಗಸೂಚಿಯಂತೆ ಮಾನ್ಯ ಜಿಲ್ಲಾಧಿಕಾರಿಗಳು, ದಕ್ಷಿಣ ಕನ್ನಡ ಜಿಲ್ಲೆ ಇವರ ಅನುಮೋದನೆಯಂತೆ ದಕ್ಷಿಣ ಕನ್ನಡ ಜಿಲ್ಲೆಯ 7 ಶಿಶು ಅಭಿವೃದ್ಧಿ ಯೋಜನೆಗಳಲ್ಲಿ ಖಾಲಿ ಇರುವ 14 ಅಂಗನವಾಡಿ ಕಾರ್ಯಕರ್ತೆ(ಅನುಬಂಧ– 1ರಲ್ಲಿ) ಹಾಗೂ 68 ಅಂಗನವಾಡಿ ಸಹಾಯಕಿ (ಅನುಬಂಧ– 2ರಲ್ಲಿ) ಗೌರವ ಸೇವೆಯ ಹುದ್ದೆಗಳನ್ನು ಭರ್ತಿ ಮಾಡಲು ಆನ್‌ಲೈನ್ (ವೆಬ್‌ಸೈಟ್ ವಿಳಾಸ: **www.anganwadirecruit.kar.nic.in**) ಮೂಲಕ ಈ ಕೆಳಗಿನ ಮಾರ್ಗಸೂಚಿ/ನಿಬಂಧನೆಗಳು ತಿಳಿಸಿರುವಂತೆ ಅರ್ಹ ಮಹಿಳಾ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. 25.10.2018 ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವಾಗಿರುತ್ತದೆ.

**ಸೂಚನೆಗಳು:**

1. ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿ ಹುದ್ದೆಗಳಿಗೆ ಆನ್‌ಲೈನ್ (Online)ನಲ್ಲಿ ಸಲ್ಲಿಸಿದ ಅರ್ಜಿಗಳನ್ನು ಮಾತ್ರ ಪರಿಗಣಿಸಲಾಗುವುದು.
2. ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಮೊದಲು ಈ ಕೆಳಗಿನ ನೇಮಕಾತಿಯ ಮಾರ್ಗಸೂಚಿ/ನಿಬಂಧನೆಗಳನ್ನು ಸ್ಪಷ್ಟವಾಗಿ ಓದಿಕೊಂಡು ನೀಡಲಾಗಿರುವ ಸೂಚನೆಯಂತೆ ಅರ್ಜಿಗಳನ್ನು ಭರ್ತಿ ಮಾಡಿ ಅವಶ್ಯಕ ದೃಢೀಕೃತ ದಾಖಲೆಗಳನ್ನು ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡಿ ಅರ್ಜಿ ಸಲ್ಲಿಸುವುದು.
3. ಆನ್‌ಲೈನ್ (Online) ಮೂಲಕವೇ ಎಲ್ಲಾ ಅಗತ್ಯ ದಾಖಲಾತಿಗಳನ್ನು ಸಲ್ಲಿಸುವುದು. ತದನಂತರ ಸಲ್ಲಿಸುವ ದಾಖಲಾತಿಗಳನ್ನು ಪರಿಗಣಿಸಲಾಗುವುದಿಲ್ಲ.

ಉಪನಿರ್ದೇಶಕರು
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
ದ.ಕ.ಜಿಲ್ಲೆ., ಮಂಗಳೂರು

ಆನ್ ಲೈನ್ ಅರ್ಜಿಯೊಂದಿಗೆ ಲಗತ್ತಿಸಬೇಕಾದ ದಾಖಲಾತಿಗಳು:

1. ಅರ್ಜಿ ನಿಗದಿತ ನಮೂನೆಯಲ್ಲಿ (ಆನ್‌ಲೈನ್)
2. ಕಾರ್ಯಕರ್ತೆ ಹುದ್ದೆಗೆ ಜನ್ಮ ದಿನಾಂಕ ಇರುವ ಎಸ್.ಎಸ್.ಎಲ್.ಸಿ ಅಂಕಪಟ್ಟಿ.

   ಸಹಾಯಕಿ ಹುದ್ದೆಗೆ ಜನ್ಮ ದಿನಾಂಕ ನಮೂದಿಸಿರುವ ಶಿಕ್ಷಣ ಇಲಾಖೆ ನೀಡಿರುವ TC (ವರ್ಗಾವಣೆ ಪ್ರಮಾಣ ಪತ್ರ).
3. ನಿಗದಿ ಪಡಿಸಿದ ವಿದ್ಯಾರ್ಹತೆಯ ಅಂಕಪಟ್ಟಿ.
4. ಅಭ್ಯರ್ಥಿಯು ಅದೇ ಗ್ರಾಮದಲ್ಲಿ (ನಗರ ಪ್ರದೇಶವಾಗಿದ್ದಲ್ಲಿ ಅದೇ ವಾರ್ಡಿನಲ್ಲಿ) ವಾಸ್ತವ್ಯವಿರುವ ಬಗ್ಗೆ ತಹಶೀಲ್ದಾರರು/ಉಪ ತಹಶೀಲ್ದಾರರಿಂದ ಪಡೆದ ಒಂದು (1) ವರ್ಷದೊಳಗೆ ನೀಡಿರುವ ವಾಸಸ್ಥಳ ದೃಢೀಕರಣ ಪತ್ರ.
5. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳಿಗೆ ಮೀಸಲಿರಿಸಿದ ಕೇಂದ್ರಗಳಿಗೆ ಅಭ್ಯರ್ಥಿಗಳ ಜಾತಿ ಪ್ರಮಾಣ ಪತ್ರ.
6. ವಿಧವೆಯಾಗಿದ್ದಲ್ಲಿ ಪತಿಯ ಮರಣ ಪ್ರಮಾಣ ಪತ್ರ.
7. ಅಭ್ಯರ್ಥಿಯು ಆತ್ಮಹತ್ಯೆ ಮಾಡಿಕೊಂಡ ರೈತರ ಪತ್ನಿಯಾಗಿದ್ದಲ್ಲಿ ಉಪವಿಭಾಗಾಧಿಕಾರಿಗಳಿಂದ ಪಡೆದ ಪ್ರಮಾಣ ಪತ್ರ.
8. ಅಂಗನವಾಡಿ ಕಾರ್ಯಕರ್ತೆ ಹುದ್ದೆಗೆ ಅರ್ಜಿ ಸಲ್ಲಿಸುವವರು ಅಂಗವಿಕಲರಾಗಿದ್ದಲ್ಲಿ, ಅಂಗವಿಕಲತೆ ಪ್ರಮಾಣ ಪತ್ರ. (ಅಂಗವಿಕಲರ ಗುರುತು ಚೀಟಿ ಪ್ರತಿ).
9. ಅಭ್ಯರ್ಥಿಯು ವಿಚ್ಛೇದಿತರಾಗಿದ್ದಲ್ಲಿ, ವಿಚ್ಛೇದನಾ ಪ್ರಮಾಣ ಪತ್ರ. (ನ್ಯಾಯಾಲಯದಿಂದ ಪಡೆದಿರಬೇಕು).
10. ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ವತಿಯಿಂದ ನಡೆಸಲ್ಪಟ್ಟ ಮಾಜಿ ದೇವದಾಸಿಯರ ಸಮೀಕ್ಷೆಯ ಪಟ್ಟಿಯಲ್ಲಿರುವ ಮಾಜಿ ದೇವದಾಸಿಯರ ಮಕ್ಕಳು ಅರ್ಜಿ ಸಲ್ಲಿಸಿದಲ್ಲಿ ಈ ಬಗ್ಗೆ ಮಹಿಳಾ ಅಭಿವೃದ್ಧಿ ನಿಗಮದ ಅಧಿಕಾರಿಗಳಿಂದ ಪಡೆದ ಪ್ರಮಾಣ ಪತ್ರ.
11. ಅಭ್ಯರ್ಥಿಯು ಪರಿತ್ಯಕ್ತೆಯಾಗಿದ್ದಲ್ಲಿ, ಪರಿತ್ಯಕ್ತೆ ಎಂಬ ಬಗ್ಗೆ ಗ್ರಾಮ ಪಂಚಾಯತ್‌ನಿಂದ ಪಡೆದ ಪ್ರಮಾಣ ಪತ್ರ.
12. ಅಭ್ಯರ್ಥಿಯು ಇಲಾಖೆಯ ಸುಧಾರಣಾ ಸಂಸ್ಥೆ/ರಾಜ್ಯ ಮಹಿಳಾ ನಿಲಯಗಳ ನಿವಾಸಿಯಾಗಿದ್ದಲ್ಲಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳಿಂದ ಪಡೆದ ಪ್ರಮಾಣ ಪತ್ರ.
13. ಅಭ್ಯರ್ಥಿಯು ಯೋಜನಾ ನಿರಾಶ್ರಿತರಾಗಿದ್ದಲ್ಲಿ, ತಹಶೀಲ್ದಾರರಿಂದ ಪಡೆದ ಪ್ರಮಾಣ ಪತ್ರ.

ಉಪನಿರ್ದೇಶಕರು
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
ದ.ಕ.ಜಿಲ್ಲೆ., ಮಂಗಳೂರು

20/9/18

## Department of Women & Child Development, Dakshina Kannada

| Sl.no | ICDS Project | District |
|---|---|---|
| 1 | Belthangady | Dakshina Kannada |
| 2 | Sullia | |
| 3 | Mangaluru Urban | |
| 4 | Mangaluru Rural | |
| 5 | Bantwal | |
| 6 | Vitla | |
| 7 | Puttur | |

ಉಪನಿರ್ದೇಶಕರು
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
ದ.ಕ.ಜಿಲ್ಲೆ., ಮಂಗಳೂರು
20/9/18

## Help Desk

## Contact for required Details

| Sl.no | ICDS Project | Contact No |
|---|---|---|
| 1 | Belthangady | 08256-232134 |
| 2 | Sullia | 08257-230239 |
| 3 | Mangaluru Urban | 0824-2432809 |
| 4 | Mangaluru Rural | 0824-2263199 |
| 5 | Bantwal | 08255-232465 |
| 6 | Vitla | 08255-238080 |
| 7 | Puttur | 08251-230388 |

ಉಪನಿರ್ದೇಶಕರು
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
ದ.ಕ.ಜಿಲ್ಲೆ., ಮಂಗಳೂರು

20/9/18

# Vacancy List

**Post : Worker    District : Dakshina Kannada**

| Sl. No | ICDS Project | Grama Panchayath/ Ward | Centre Name | Reserved for |
|---|---|---|---|---|
| 1 | Belthangady | Dharmasthala | Kattadabailu | Others |
| 2 | Belthangady | Mogru | Kanchinadka | Others |
| 3 | Belthangady | Thanniru Pantha | Alake mini | Others |
| 4 | Mangalore Urban | Alape (South) / 50 | Vijaya Nagara | Others |
| 5 | Mangalore Urban | Boloor / 16 | Dambel | Others |
| 6 | Mangalore Urban | Kadri / 22 | Yeyyadi | Others |
| 7 | Mangalore Urban | Kankanadi / 38 | U.B.M.C. Balmatta | Others |
| 8 | Mangalore Rural | Chelairu | Madhya | Others |
| 9 | Mangalore Rural | Hosabettu | Masthikatte | Others |
| 10 | Mangalore Rural | Moodushedde | Edurupadavu | Others |
| 11 | Buntwal | Kukkipadi | Hennurapadavu | Others |
| 12 | Buntwal | Meramajalu | Kaplkadu | Others |
| 13 | Buntwal | Pajeeru | Adka | Others |
| 14 | Vittla | Peraje | Melina Peraje | Others |
| 15 | Puttur | Kasaba/11 | Nellikatte | Others |
| 16 | Puttur | Savanoor | Periyadka | Others |

# Vacancy List

**Post : Helper    District : Dakshina Kannada**

| Sl. No | ICDS Project | Grama Panchayath/ Ward | Centre Name | Reserved for |
|---|---|---|---|---|
| 1 | Belthangady | Balanja | Balanja | Others |
| 2 | Belthangady | Barya | Puthila Heraje | Others |
| 3 | Belthangady | Charmadi | Thotathadi | Others |
| 4 | Belthangady | Kaniyuru | Kaniyuru | Others |
| 5 | Belthangady | Machina | Machina | Others |
| 6 | Belthangady | Naravi | Kuthluru | Others |
| 7 | Belthangady | Nidle | Nidle | Others |
| 8 | Belthangady | Pattana Panchayath/ Ward no-8 | Sudhemugeru | SC |
| 9 | Belthangady | Shirlalu | Bottilmaru | Others |
| 10 | Sullia | Amara Mudnuru /III | Kutelu | Others |
| 11 | Sullia | Madappadi | Madappadi | Others |
| 12 | Sullia | Mandekolu / III | Mailettipare | Others |
| 13 | Sullia | Mandekolu /II | Peralu | Others |
| 14 | Sullia | Nalkuru/ I | Nadugallu | Others |
| 15 | Sullia | Yedamangala/ II | Marduradka | Others |
| 16 | Mangalore Urban | Alape / 51 | Kannagudde | Others |
| 17 | Mangalore Urban | Alape / 51 | New Friends Club Padil | Others |
| 18 | Mangalore Urban | Attavara / 40 | Police Line 1 | Others |
| 19 | Mangalore Urban | Derebail / 25 | Sri Krishna Bhajana Mandira Kottara | Others |
| 20 | Mangalore Urban | Kadri / 22 | Yeyyadi | Others |
| 21 | Mangalore Urban | Kannur / 52 | Dayambu Borugudda | Others |
| 22 | Mangalore Urban | Katipalla / 3 | 1st Block Samaja Mandira | Others |
| 23 | Mangalore Urban | Katipalla / 3 | 3rd Block Ganesh Katte | Others |
| 24 | Mangalore Urban | Kunjathabail / 13 | Sneha Balaga Kunjathabail | Others |
| 25 | Mangalore Urban | Padukodi / 12 | Kulur Udaya Yuvaka Mandala | Others |
| 26 | Mangalore Rural | Adyar | Adyarpadavu - II | Others |
| 27 | Mangalore Rural | Arkula | Navodaya Kalika Kendra | Others |
| 28 | Mangalore Rural | Bajpe | Shanthigudde | Others |
| 29 | Mangalore Rural | Chelairu | Renjargudde | Others |
| 30 | Mangalore Rural | Edapadavu | Borugudde | Others |
| 31 | Mangalore Rural | Haleyangadi | Sasihithlu- II | Others |
| 32 | Mangalore Rural | Harekala | Newpadpu | Others |
| 33 | Mangalore Rural | Kallabettu / W.No.18 | Neeralike | Others |
| 34 | Mangalore Rural | Konaje | Baruva | Others |
| 35 | Mangalore Rural | Kotekar Townpanchayath/ward No.11 | Paneeru | Others |
| 36 | Mangalore Rural | Malluru | Badriya Nagara | Others |
| 37 | Mangalore Rural | Manjanady | Mangalanthi- I | Others |
| 38 | Mangalore Rural | Moodbidre Town/ W.No.4 | Moodbidre pete | Others |
| 39 | Mangalore Rural | Moodbidre Town/ Ward 17 | Ladi | Others |
| 40 | Mangalore Rural | Padumarnadu | Bannadka | Others |

| | | | | |
|---|---|---|---|---|
| 41 | Mangalore Rural | Padupanambur | Kallapu | Others |
| 42 | Mangalore Rural | Pavoor | Innoli -1 | Others |
| 43 | Mangalore Rural | Pavoor | Kamblapadavu | Others |
| 44 | Mangalore Rural | Someshwar | Pilar | Others |
| 45 | Mangalore Rural | Ullala Town /ward 12 | Mukkacheri | Others |
| 46 | Buntwal | Balthila | Sannakukku | Others |
| 47 | Buntwal | Kavalapaduru | Bogrameru | Others |
| 48 | Buntwal | Purasabhe/13 | Nandarabettu | Others |
| 49 | Buntwal | Purasabhe/18 | Uppugudde | Others |
| 50 | Buntwal | Purasabhe/5 | Mugdalgudde | Others |
| 51 | Buntwal | Sajipamuda | Karaje | Others |
| 52 | Buntwal | Sajipamunnuru | Manjalpade | Others |
| 53 | Buntwal | Sangabettu | Karpekuttikala | Others |
| 54 | Buntwal | Sangabettu | Kereball | Others |
| 55 | Buntwal | Ulli | Hegganaguli | Others |
| 56 | Vittla | Bolanthuru | Nadaje | Others |
| 57 | Vittla | Kadeshivalaya | Perlapu | Others |
| 58 | Vittla | Kepu | Maira | Others |
| 59 | Vittla | Manchi | Kukkaje-2 | Others |
| 60 | Puttur | 34 Nekkiladi | Karavelu | Others |
| 61 | Puttur | Aryapu | Nelyadka | Others |
| 62 | Puttur | Badagannuru | Thulasiyadka | ST |
| 63 | Puttur | Golithottu | Arla | Others |
| 64 | Puttur | Kasaba/30 | Sampya | Others |
| 65 | Puttur | Kasaba/7 | Ragidakumeru | Others |
| 66 | Puttur | Kutrupadi | Balya Hosmata | Others |
| 67 | Puttur | Noojibalthila | Meenadi | Others |
| 68 | Puttur | Perabe | Surull | Others |

ಸರ್ಕಾರಿ ಆದೇಶ ಸಂಖ್ಯೆ: ಮಮಇ 303 ಐಸಿಡಿ 2017, ದಿನಾಂಕ:23.09.2017 ಕ್ಕೆ ಅನುಬಂಧ

ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರನ್ನು ಆಯ್ಕೆ ಮಾಡಲು ಮಾರ್ಗಸೂಚಿಗಳು ಮತ್ತು ಅರ್ಹತೆಯ ಮಾನದಂಡಗಳು.

1. ಅಂಗನವಾಡಿ ಕಾರ್ಯಕರ್ತೆ / ಸಹಾಯಕಿಯರ ಆಯ್ಕೆಗೆ ಅರ್ಹತೆ ಮಾನದಂಡಗಳು:-

1) <u>ವಯೋಮಿತಿ:</u>

ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರ ಹುದ್ದೆಗೆ ಅರ್ಜಿ ಸಲ್ಲಿಸಲು 18-35 ವರ್ಷ ವಯೋಮಿತಿಯೊಳಗಿರಬೇಕು.

2) <u>ಸ್ಥಳೀಯತೆ:</u>

ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರ ಆಯ್ಕೆಗೆ ಸ್ಥಳೀಯರಾಗಿರಬೇಕು.

ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ದಿನಾಂಕದ ಒಂದು(1) ವರ್ಷದೊಳಗೆ ಸಂಬಂಧಪಟ್ಟ ತಹಶೀಲ್ದಾರರಿಂದ/ಉಪ ತಹಶೀಲ್ದಾರರಿಂದ ಪಡೆದ ವಾಸಸ್ಥಳ ದೃಢೀಕರಣ ಪತ್ರವನ್ನು ಕಡ್ಡಾಯವಾಗಿ ಅರ್ಜಿಯೊಂದಿಗೆ ಸಲ್ಲಿಸತಕ್ಕದ್ದು.

3) <u>ವಿದ್ಯಾರ್ಹತೆ:</u>

i) **<u>ಅಂಗನವಾಡಿ ಕಾರ್ಯಕರ್ತೆ:</u>** ಎಸ್.ಎಸ್.ಎಲ್.ಸಿ ತೇರ್ಗಡೆ. ಹೆಚ್ಚಿನ ವಿದ್ಯಾರ್ಹತೆಯನ್ನು ಆಯ್ಕೆಗೆ ಪರಿಗಣಿಸುವಂತಿಲ್ಲ.

ಅ) ಕರ್ನಾಟಕ ರಾಜ್ಯ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ ನಡೆಸುವ ಮುಕ್ತ ಶಾಲೆ/ಮುಕ್ತ ವಿದ್ಯಾಲಯಗಳಲ್ಲಿ ಎಸ್.ಎಸ್.ಎಲ್.ಸಿ ತೇರ್ಗಡೆ ಹೊಂದಿದ ಅಭ್ಯರ್ಥಿಗಳು ಪ್ರಥಮ/ದ್ವಿತೀಯ ಭಾಷೆಯಾಗಿ ಕನ್ನಡ ಹಾಗೂ ಸಾಮಾನ್ಯ ಗಣಿತ ಮತ್ತು ಸಮಾಜ ಶಾಸ್ತ್ರ/ಸಮಾಜ ವಿಜ್ಞಾನ ವಿಷಯಗಳನ್ನು ಕಡ್ಡಾಯವಾಗಿ ವ್ಯಾಸಂಗ ಮಾಡಿದ್ದು, ಪ್ರಮಾಣ ಪತ್ರ/ಅಂಕಪಟ್ಟಿಯು ಗರಿಷ್ಠ 625, ಕನಿಷ್ಠ 219 ಅಂಕಗಳನ್ನು ಹೊಂದಿದಲ್ಲಿ, ಅಂತಹ ಅಭ್ಯರ್ಥಿಗಳನ್ನು ಪರಿಗಣಿಸತಕ್ಕದ್ದು.

ಆ) ಬೇರೆ ರಾಜ್ಯಗಳ ಶಾಲೆಗಳಲ್ಲಿ ವ್ಯಾಸಂಗ ಮಾಡಿದ್ದು, ಕನ್ನಡವನ್ನು ಪ್ರಥಮ/ದ್ವಿತೀಯ ಭಾಷೆಯಾಗಿ ಅಭ್ಯಾಸ ಮಾಡಿದ್ದರೂ, ಎಸ್.ಎಸ್.ಎಲ್.ಸಿ ಪರೀಕ್ಷೆಗೆ ಆ ರಾಜ್ಯದಲ್ಲಿ ನಿಗದಿಪಡಿಸಿದ ಗರಿಷ್ಠ ಹಾಗೂ ಕನಿಷ್ಠ ಅಂಕಗಳು ಹಾಗೂ ಕರ್ನಾಟಕ ರಾಜ್ಯದಲ್ಲಿ ನಿಗದಿಪಡಿಸಿದ ಗರಿಷ್ಠ ಹಗೂ ಕನಿಷ್ಠ ಅಂಕಗಳಲ್ಲಿ ವ್ಯತ್ಯಾಸವಿದ್ದಲ್ಲಿ, ಕರ್ನಾಟಕದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿಗಳನ್ನು ಮಾತ್ರ ಪರಿಗಣಿಸತಕ್ಕದ್ದು.

ಇ) ಅಂಗನವಾಡಿ ಕಾರ್ಯಕರ್ತೆಯರು ಶಾಲಾ ಪೂರ್ವ ಶಿಕ್ಷಣವನ್ನು ಹಾಗೂ ದಾಖಲೆಗಳನ್ನು ಕನ್ನಡದಲ್ಲಿ ನಿರ್ವಹಿಸಬೇಕಾಗಿರುವುದರಿಂದ ಅಭ್ಯರ್ಥಿಗಳು ಯಾವುದೇ ಭಾಷಾ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ್ದರೂ ಹಾಗೂ ಯಾವುದೇ ರಾಜ್ಯದಲ್ಲಿ ವ್ಯಾಸಂಗ ಮಾಡಿದ್ದರೂ ಸಹ ಅವರು ಕನ್ನಡ ಭಾಷೆಯನ್ನು ಪ್ರಥಮ/ದ್ವಿತೀಯ ಭಾಷೆಯಾಗಿ ವ್ಯಾಸಂಗ ಮಾಡಿರಬೇಕು ಹಾಗೂ ಮಾತೃಭಾಷೆ ಕನ್ನಡವಲ್ಲದೇ ಇರುವ ಅಭ್ಯರ್ಥಿಗಳಿಗೆ ಆಯ್ಕೆ ಸಮಿತಿಯು ಆಯ್ಕೆ ಸಮಯದಲ್ಲಿ ಸಂದರ್ಶನ ಏರ್ಪಡಿಸಿ ಹಾಗೂ ಅವಶ್ಯವಿದ್ದಲ್ಲಿ ಕನ್ನಡ ಭಾಷೆಯ ಜ್ಞಾನದ ಕುರಿತಂತೆ ಓದಿಸಿ, ಬರೆಸಿ ಅವರ ಕನ್ನಡ ಭಾಷಾ ಜ್ಞಾನವನ್ನು ಪರೀಕ್ಷಿಸಿ ಅವರನ್ನು ಆಯ್ಕೆಯನ್ನು ಮಾಡುವ ಬಗ್ಗೆ ಸಮಿತಿಯವರು ನಿರ್ಧರಿಸುವುದು.

**ii) ಅಂಗನವಾಡಿ ಸಹಾಯಕಿ:**

ಅ) ಕನಿಷ್ಠ 4ನೇ ತರಗತಿ ತೇರ್ಗಡೆ, ಗರಿಷ್ಠ 9ನೇ ತರಗತಿ ತೇರ್ಗಡೆ. ಇದರಲ್ಲಿ ಹೆಚ್ಚಿನ ವಿದ್ಯಾರ್ಹತೆಯುಳ್ಳವರನ್ನು ಆಯ್ಕೆ ಮಾಡಬೇಕು. 9ನೇ ತರಗತಿಗಿಂತ ಹೆಚ್ಚಿನ ವಿದ್ಯಾರ್ಹತೆಯನ್ನು ಆಯ್ಕೆಗೆ ಪರಿಗಣಿಸುವಂತಿಲ್ಲ.

ಆ) ಒಂದೇ ವಿದ್ಯಾರ್ಹತೆಯುಳ್ಳ ಒಂದಕ್ಕಿಂತ ಹೆಚ್ಚು ಅರ್ಜಿ ಬಂದಿದಲ್ಲಿ ಹೆಚ್ಚು ಅಂಕಗಳಿಸಿದವರನ್ನು ಆಯ್ಕೆ ಮಾಡಬೇಕು.

## iii) ಅಂಗನವಾಡಿ ಕೇಂದ್ರಗಳ ವ್ಯಾಪ್ತಿ ಗುರುತಿಸುವ ಬಗ್ಗೆ:

1) ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರು ಗೌರವಸೇವೆಗೆ ಸೇರಿದೆ, ಅಂಗನವಾಡಿ ಕೇಂದ್ರ ಪ್ರಾರಂಭಿಸುವ ಗ್ರಾಮಾಂತರ ಪ್ರದೇಶದ ಕಂದಾಯ ಗ್ರಾಮ/ನಗರ ಪ್ರದೇಶದ ಕಂದಾಯ ವಾರ್ಡ್‌ನ ಒಟ್ಟು ಜನಸಂಖ್ಯೆಯು ಶೇಕಡ 40 ಕ್ಕಿಂತ ಹೆಚ್ಚು ಪರಿಶಿಷ್ಟ ಜಾತಿ ಹಾಗೂ ಶೇಕಡ 40 ಕ್ಕಿಂತ ಹೆಚ್ಚು ಪರಿಶಿಷ್ಟ ವರ್ಗದವರನ್ನು ಒಳಗೊಂಡಿದ್ದ ಸಂದರ್ಭದಲ್ಲಿ ಈ ವರ್ಗಗಳ ಪೈಕಿ ಅತೀ ಹೆಚ್ಚು ಜನಸಂಖ್ಯೆಯಿರುವ ವರ್ಗದವರಿಗೆ ಕಾರ್ಯಕರ್ತೆ/ಸಹಾಯಕಿಯ ಹುದ್ದೆಯನ್ನು ನಿಗದಿಪಡಿಸಲಾಗಿದೆಯೆಂದು ಸೂಚಿಸಬೇಕು. ನಿಗದಿಪಡಿಸಿದ ವರ್ಗದವರನ್ನೇ ಆಯ್ಕೆ ಮಾಡುವುದು.

2) ಒಂದು ಗ್ರಾಮದಲ್ಲಿ ಈಗಾಗಲೇ ಅಂಗನವಾಡಿ ಕೇಂದ್ರವಿದ್ದು ಪುನಃ ಬೇಡಿಕೆಗೆ ಅನುಸಾರವಾಗಿ ಹೊಸ ಕೇಂದ್ರವನ್ನು ಪ್ರಾರಂಭಿಸುತ್ತಿದ್ದಲ್ಲಿ, ಹೊಸ ಕೇಂದ್ರ ಪ್ರಾರಂಭಿಸುವ ಪ್ರದೇಶದ (ವ್ಯಾಪ್ತಿಯ) ಜನಸಂಖ್ಯೆಯಲ್ಲಿ ಶೇಕಡ 40 ಕ್ಕಿಂತ ಹೆಚ್ಚು ಜನಸಂಖ್ಯೆ ಪರಿಶಿಷ್ಟ ಜಾತಿ ಅಥವಾ ಪರಿಶಿಷ್ಟ ವರ್ಗದವರಿದ್ದಲ್ಲಿ ಆ ಅಂಗನವಾಡಿ ಕೇಂದ್ರಕ್ಕೆ ಸದರಿ ವರ್ಗದವರಿಗೆ ಕಾರ್ಯಕರ್ತೆ/ಸಹಾಯಕಿ ಹುದ್ದೆಯನ್ನು ನಿಗದಿಪಡಿಸಿ ಪ್ರಕಟಣೆ ಹೊರಡಿಸಿ ಅರ್ಜಿಗಳನ್ನು ಆಹ್ವಾನಿಸಿ ಆ ವರ್ಗದವರನ್ನೇ ಆಯ್ಕೆ ಮಾಡುವುದು.

3) ಶೇಕಡ 25 ಕ್ಕಿಂತ ಹೆಚ್ಚು ಅಲ್ಪಸಂಖ್ಯಾತ (ಮುಸ್ಲಿಮರು, ಕ್ರಿಶ್ಚಿಯನರು, ಜೈನರು, ಬೌದ್ಧರು, ಪಾರ್ಸಿಗಳು ಮತ್ತು ಸಿಕ್ಕರು) ಜನಸಂಖ್ಯೆಯಿರುವ ಪ್ರದೇಶದ ಅಂಗನವಾಡಿ ಕೇಂದ್ರಗಳಲ್ಲಿ ಕನ್ನಡ ಭಾಷೆಯೊಂದಿಗೆ ಆಯಾ ಅಲ್ಪಸಂಖ್ಯಾತ ಸಮುದಾಯದ ಭಾಷೆ ಬಲ್ಲವರನ್ನು ಕಾರ್ಯಕರ್ತೆ/ಸಹಾಯಕಿಯ ಹುದ್ದೆಗೆ ಆಯ್ಕೆ ಮಾಡುವುದು.

4) ಪರಿಶಿಷ್ಟ ಜಾತಿ /ಪರಿಶಿಷ್ಟ ಪಂಗಡದವರಿಗೆ ಕಾರ್ಯಕರ್ತೆ/ಸಹಾಯಕಿ ಹುದ್ದೆ ನಿಗದಿಪಡಿಸಿದ ಅಂಗನವಾಡಿ ಕೇಂದ್ರಗಳಲ್ಲಿ ನಿಗದಿತ ವರ್ಗದವರಿಂದ ಅರ್ಜಿಗಳು ಬಾರದಿದ್ದಲ್ಲಿ ಮರು ಪ್ರಕಟಣೆಯನ್ನು 7 ದಿವಸದೊಳಗೆ ಹೊರಡಿಸಿ ಪುನಃ ಅರ್ಜಿಗಳನ್ನು ಆಹ್ವಾನಿಸಬೇಕು. ಆಗಲೂ ನಿಗದಿತ ವರ್ಗದವರಿಂದ ಅರ್ಜಿಗಳು ಬಾರದೇ ಹೋದಲ್ಲಿ ಪುನಃ 10 ದಿನಗಳೊಳಗೆ ಪ್ರಕಟಣೆ ಹೊರಡಿಸಿ ಸಾಮಾನ್ಯ ವರ್ಗದವರಿಂದ ಅರ್ಜಿ ಆಹ್ವಾನಿಸಿ ಆಯ್ಕೆ ಮಾಡುವುದು.

5) ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರ ಆಯ್ಕೆಗೆ ಸಂಬಂಧಿಸಿದ ಅಂಗನವಾಡಿ ಕೇಂದ್ರದ ಗ್ರಾಮಾಂತರ ಪ್ರದೇಶದ ಕಂದಾಯ ಗ್ರಾಮ ಹಾಗೂ ನಗರ ಪ್ರದೇಶದ ಕಂದಾಯ ವಾರ್ಡ್‌ಗಳನ್ನು ಪರಿಗಣಿಸಬೇಕು. ಚುನಾವಣಾ ವಾರ್ಡ್‌ಗಳನ್ನು ಪರಿಗಣಿಸುವಂತಿಲ್ಲ.

6) ಒಂದು ಗ್ರಾಮದಲ್ಲಿ ಒಂದಕ್ಕಿಂತ ಹೆಚ್ಚು ಅಂಗನವಾಡಿ ಕೇಂದ್ರಗಳಿದ್ದಾಗ, ಆ ಕೇಂದ್ರ ವ್ಯಾಪ್ತಿಗೆ ಸಂಬಂಧಪಟ್ಟ ಗ್ರಾಮ/ವಾರ್ಡ್‌ರವರಿಂದ ಮಾತ್ರ ಅರ್ಜಿಗಳನ್ನು ಆಹ್ವಾನಿಸಬೇಕು. ಒಂದು ಪಕ್ಷ ಆ ಗ್ರಾಮ/ವಾರ್ಡ್‌ರವರಿಂದ ಅರ್ಜಿಗಳು ಸ್ವೀಕೃತವಾಗದೇ ಹೋದಲ್ಲಿ 7 ದಿವಸದೊಳಗೆ ಮರು ಪ್ರಕಟಣೆ ಹೊರಡಿಸಬೇಕು. ಎರಡನೆಯ ಬಾರಿಯೂ ಸ್ಥಳೀಯರಿಂದ ಅರ್ಜಿ ಸ್ವೀಕೃತವಾಗದಿದ್ದಲ್ಲಿ ಪುನಃ 10 ದಿವಸದೊಳಗೆ ಪ್ರಕಟಣೆ ಹೊರಡಿಸಿ ಅತ್ಯಂತ ಸಮೀಪದ ಗ್ರಾಮ/ವಾರ್ಡ್‌ಗಳಿಂದ ಅರ್ಹ ಅಭ್ಯರ್ಥಿಗಳನ್ನು ಆಯ್ಕೆಗೆ ಪರಿಗಣಿಸುವುದು.

7) ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರ ಆಯ್ಕೆಗಾಗಿ ಎರಡನೇ ಬಾರಿಗೆ ಯಾವುದೇ ಮರುಪ್ರಕಟಣೆ ಹೊರಡಿಸುವ ಮುನ್ನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಸ್ವತಃ ಗ್ರಾಮ/ವಾರ್ಡ್‌ಗೆ ಭೇಟಿ ನೀಡಿ ಆ ವರ್ಗದ/ಗ್ರಾಮದ/ವಾರ್ಡ್‌ನ ಅರ್ಹ ಅಭ್ಯರ್ಥಿಗಳು ಲಭ್ಯವಿಲ್ಲವೆಂಬ ಬಗ್ಗೆ ಸ್ಥಳ ಪರಿಶೀಲನಾ ವರದಿ ಪಡೆದುಕೊಂಡಿರಬೇಕು.

8) ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರ ಆಯ್ಕೆಗಾಗಿ ಪ್ರಕಟಣೆಯನ್ನು ಸ್ಪಷ್ಟ/ನಿಖರವಾಗಿ ಹೊರಡಿಸತಕ್ಕದ್ದು. ಹುದ್ದೆ ಖಾಲಿಯಿರುವ ಸ್ಥಳ, ಆ ಹುದ್ದೆ ಜನಸಂಖ್ಯೆ ಆಧಾರದಲ್ಲಿ ಯಾವ ವರ್ಗಕ್ಕೆ

ನಿಗದಿಪಡಿಸಲಾಗಿದೆ ಎಂಬ ಬಗ್ಗೆ ತಿಳಿಸಿ ಸ್ಥಳಿಯ ದಿನಪತ್ರಿಕೆಗಳಲ್ಲಿ ಪ್ರಕಟಣೆ ಹೊರಡಿಸತಕ್ಕದ್ದು. ಪ್ರಕಟಣೆಯನ್ನು ಗ್ರಾಮದ ಕೃಷಿ ಸಂಪರ್ಕ ಕೇಂದ್ರ, ಪ್ರಾಥಮಿಕ ಆರೋಗ್ಯ ಕೇಂದ್ರ, ಶಾಲೆ, ಗ್ರಾಮ ಲೆಕ್ಕಿಗರ ಕಛೇರಿ, ಅಂಗನವಾಡಿ ಕಟ್ಟಡ, ಗ್ರಾಮ ಪಂಚಯತ್ ಕಛೇರಿ ಕಟ್ಟಡ ಹಾಗೂ ಇನ್ನಿತರ ಸಾರ್ವಜನಿಕ ಸ್ಥಳಗಳಲ್ಲಿ ಸೂಚನಾ ಫಲಕದ ಮೇಲೆ ಪ್ರದರ್ಶಿಸತಕ್ಕದ್ದು. ಪ್ರಕಟಣೆ ಹೊರಡಿಸಿದ ದಿನಾಂಕದಿಂದ 25 ದಿನದೊಳಗೆ ಅರ್ಜಿ ಸಲ್ಲಿಸುವ ಕಾಲಾವಧಿಯನ್ನು ನಿಗದಿಪಡಿಸಿರತಕ್ಕದ್ದು ಹಾಗೂ ಪ್ರಕಟಣೆಯ ಪ್ರತಿಯನ್ನು ಆಯ್ಕೆ ಸಮಿತಿಯ ಎಲ್ಲಾ ಸದಸ್ಯರಿಗೂ ಕಳುಹಿತಕ್ಕದ್ದು.

9) ಅಂಗನವಾಡಿ ಕಾರ್ಯಕರ್ತೆ/ಸಹಾಯಕಿ ಹುದ್ದೆಗೆ ಅರ್ಜಿ ಸಲ್ಲಿದವರಲ್ಲಿ ಒಂದಕ್ಕಿಂತ ಹೆಚ್ಚು ಅಭ್ಯರ್ಥಿಗಳು ಸಮಾನ ಅಂಕಗಳಿಸಿದ್ದಲ್ಲಿ ವಯೋ ಹಿರಿತನವನ್ನು ಪರಿಗಣಿಸಬೇಕು. ವಯಸ್ಸು ಸಮಾನವಾಗಿದ್ದಲ್ಲಿ ವಿವಾಹಿತರನ್ನು ಪರಿಗಣಿಸಬೇಕು.

10) ಅಂಗನವಾಡಿ ಕಾರ್ಯಕರ್ತೆ ಹುದ್ದೆ ಖಾಲಿಯಾದ/ಹೊಸ ಕೇಂದ್ರಕ್ಕೆ ಅರ್ಹ ಸಹಾಯಕಿಯರಿಂದ ಕಾರ್ಯಕರ್ತೆ ಹುದ್ದೆ ಕೋರಿ ಅರ್ಜಿ ಸ್ವೀಕೃತವಾಗಿದ್ದಲ್ಲಿ, ಅವರನ್ನೇ ಆಯ್ಕೆ ಮಾಡತಕ್ಕದ್ದು. ಅಂತಹ ಯಾವುದೇ ಅರ್ಜಿಗಳು ಸ್ವೀಕೃತವಾಗಿಲ್ಲದಿದ್ದಲ್ಲಿ, ಸ್ಥಾನಪಲ್ಲಟ ಕೋರಿ ಬಂದಿರುವ ಅರ್ಜಿಗಳನ್ನು ಪರಿಗಣಿಸುವುದು. ಸ್ಥಾನಪಲ್ಲಟ ಕೋರಿ ಯಾವುದೇ ಅರ್ಜಿಗಳು ಸ್ವೀಕೃತವಾಗಿಲ್ಲದಿದ್ದಲ್ಲಿ ಹೊಸದಾಗಿ ಆಯ್ಕೆ ಮಾಡುವ ಪ್ರಕ್ರಿಯೆಯನ್ನು ಪ್ರಾರಂಭಿಸಿ ಗರಿಷ್ಠ 2 ತಿಂಗಳೊಳಗೆ ಮುಗಿಸತಕ್ಕದ್ದು.

11) ಸ್ಥಳೀಯ ಚುನಾಯಿತ ಪ್ರತಿನಿಧಿಗಳು ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರ ಹುದ್ದೆಗೆ ಅರ್ಜಿ ಸಲ್ಲಿಸಿದ್ದು, ಆಯ್ಕೆಯಾಗುವ ಸಂಭವವಿದ್ದಲ್ಲಿ, ಆಯ್ಕೆ ಪಟ್ಟಿ ಪ್ರಕಟಿಸುವ ಮುನ್ನ ಚುನಾಯಿತ ಸದಸ್ಯತ್ವಕ್ಕೆ ರಾಜೀನಾಮೆ ನೀಡಿ ರಾಜೀನಾಮೆ ಅಂಗೀಕೃತ ಪತ್ರ ನೀಡಬೇಕಾಗಿರುವುದು ಕಡ್ಡಾಯ. ಅಂದರೆ ಯಾವುದಾದರೂ ಒಂದು ಸ್ಥಾನದಲ್ಲಿ ಮಾತ್ರ ಕೆಲಸ ನಿರ್ವಹಿಸಲು ಅವಕಾಶವಿದೆ.

### III) ಆಯ್ಕೆ ಆದ್ಯತೆ:

ಈ ಕೆಳಕಂಡಂತೆ ಆದ್ಯತೆ ಪಡೆಯಲು ಇಚ್ಛಿಸುವ ಅರ್ಜಿದಾರರಿ ನಿಗದಿತ ವಿದ್ಯಾರ್ಹತೆ ಹೊಂದಿದ್ದು, ವಯೋಮಿತಿಯೊಳಗೆ ಮತ್ತು ಸ್ಥಳೀಯರಾಗಿರಬೇಕಾಗಿರುವುದು ಕಡ್ಡಾಯ.

**1) <u>ಆಸಿಡ್ ದಾಳಿಗೊಳಗಾದವರ ಆಯ್ಕೆ:-</u>**

ಆಸಿಡ್ ದಾಳಿಗೆ ತುತ್ತಾದ ಮಹಿಳೆಯರು ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರ ಹುದ್ದೆಗೆ ಅರ್ಜಿ ಸಲ್ಲಿಸಿದ್ದಲ್ಲಿ, ಇತರ ಎಲ್ಲಾ ಸ್ವೀಕೃತ ಅರ್ಜಿಗಳನ್ನು ಪರಿಗಣಿಸದೆ ಮೊದಲ ಆದ್ಯತೆ ಮೇರೆಗೆ ನೇರವಾಗಿ ಅವರನ್ನೇ ಆಯ್ಕೆ ಮಾಡತಕ್ಕದ್ದು.

**2) <u>ಇಲಾಖೆಯ ಸಂಸ್ಥೆಗಳ ನಿವಾಸಿಗಳ ಆಯ್ಕೆ:</u>**

ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರ ಹುದ್ದೆಗಳಿಗೆ ಬಾಲನ್ಯಾಯ ಕಾಯ್ದೆಯಡಿ ಇಲಾಖೆಯ ಸಂಸ್ಥೆಗಳಲ್ಲಿ ಹಾಗೂ ರಾಜ್ಯ ಮಹಿಳಾ ನಿಲಯಗಳಲ್ಲಿ ಆಶ್ರಯ ಪಡೆ ಹಾಲಿ/ಮಾಜಿ ನಿವಾಸಿಗಳು ಅರ್ಜಿ ಸಲ್ಲಿಸಿದಾಗ ಮಾರ್ಗಸೂಚಿಯ ಕ್ರಮ ಸಂಖ್ಯೆ III (1)ನೆಯವರನ್ನು ಹೊರತು ಪಡಿಸಿ ಇತರ ಎಲ್ಲಾ ಸ್ವೀಕೃತ ಅರ್ಜಿಗಳನ್ನು ಪರಿಗಣಿಸಿದೆ ಮೂರನೆ ಆದ್ಯತೆ ಮೇರೆಗೆ ನೇರವಾಗಿ ಅವರನ್ನೇ ಆಯ್ಕೆ ಮಾಡತಕ್ಕದ್ದು.

ಅ) ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರ ಹುದ್ದೆಗಳಿಗೆ ವಿಧವೆಯರು ಅರ್ಜಿ ಸಲ್ಲಿಸಿದಾಗ ಮಾರ್ಗಸೂಚಿಯ III (1) ಮತ್ತು (2)ನೆಯವರನ್ನು ಹೊತರು ಪಡಿಸಿ ಇತರ ಎಲ್ಲಾ ಸ್ವೀಕೃತ ಅರ್ಜಿಗಳನ್ನು ಪರಿಗಣಿಸದೆ ಮೂರನೆ ಆದ್ಯತೆ ಮೇರೆಗೆ ನೇರವಾಗಿ ಅವರನ್ನೇ ಆಯ್ಕೆ ಮಾಡತಕ್ಕದ್ದು. ಅರ್ಜಿ ಸಲ್ಲಿಸಿದ ನಂತರ ವಿಧವೆಯಾದಲ್ಲಿ ಪರಿಗಣಿಸುವಂತಿಲ್ಲ.

ಆ) ವಿಧವೆಯರಲ್ಲಿ, ಆತ್ಮಹತ್ಯೆ ಮಾಡಿಕೊಂಡ ರೈತರ ಪತ್ನಿಗೆ(ವಿಧವೆಗೆ) ಪ್ರಥಮ ಆದ್ಯತೆ ನೀಡತಕ್ಕದ್ದು.

ಇ) ವಿಧವೆಯರು ತಾವು ಪ್ರಸ್ತುತ ಎಲ್ಲಿ ವಾಸವಾಗಿರುವುದಾಗಿ, ವಾಸಸ್ಥಳ ದೃಢೀಕರಣವನ್ನು ಸಲ್ಲಿಸಿರುತ್ತಾರೆ. ಆ ಸ್ಥಳವನ್ನೇ ಅವರ ವಾಸಸ್ಥಳವೆಂದು ಪರಿಗಣಿಸತಕ್ಕದ್ದು.

ಈ) ಒಂದೇ ಹುದ್ದೆಗೆ ಇಬ್ಬರು ವಿಧವೆಯರು ಅರ್ಜಿ ಸಲ್ಲಿಸಿದ್ದಲ್ಲಿ ಗರಿಷ್ಠ ಅಂಕ ಪಡೆದವರನ್ನು ಆಯ್ಕೆ ಮಾಡಬಹುದಾಗಿದೆ.

4) <u>ಅಂಗವಿಕಲರ ಆಯ್ಕೆ:</u>

ಅ) ಅಂಗನವಾಡಿ ಕಾರ್ಯಕರ್ತೆಯರ ಹುದ್ದೆಗಳಿಗೆ ಅಂಗವಿಕಲರು ಅರ್ಜಿ ಸಲ್ಲಿಸಿದಾಗ, ಮಾರ್ಗಸೂಚಿಯ III (1), (2) ಮತ್ತು (3) ನೆಯವರನ್ನು ಹೊರತುಪಡಿಸಿ ಇತರ ಎಲ್ಲಾ ಸ್ವೀಕೃತ ಅರ್ಜಿಗಳನ್ನು ಪರಿಗಣಿಸದೆ ನಾಲ್ಕನೆ ಆದ್ಯತೆ ಮೇರೆಗೆ ನೇರವಾಗಿ ಅವರನ್ನೇ ಆಯ್ಕೆ ಮಾಡತಕ್ಕದ್ದು.

ಆ) ಅಂಗವಿಕಲರು ಪ್ರಸ್ತುತ ತಾವು ಎಲ್ಲಿ ವಾಸವಾಗಿರುವುದಾಗಿ ವಾಸಸ್ಥಳ ಪ್ರಮಾಣ ಪತ್ರವನ್ನು ಸಲ್ಲಿಸಿರುತ್ತಾರೋ ಆ ಸ್ಥಳವನ್ನೇ ಅವರ ವಾಸಸ್ಥಳವೆಂದು ಪರಿಗಣಿಸತಕ್ಕದ್ದು.

ಇ) ಅಂಗನವಾಡಿ ಕಾರ್ಯಕರ್ತೆ ಹುದ್ದೆಯಲ್ಲಿ 3–6 ವರ್ಷ ಮಕ್ಕಳಿಗೆ ಆಟ ಮತ್ತು ಅಭಿನಯ ಗೀತೆಗಳ ಮೂಲಕ ಶಾಲಾ ಪೂರ್ವ ಶಿಕ್ಷಣವನ್ನು ನೀಡಲಾಗುತ್ತಿದ್ದು, ಚಟುವಟಿಕೆ ವೇಳೆಯಲ್ಲಿ ಮಕ್ಕಳನ್ನು ಹಿಡಿದೆತ್ತಿ ನಿಲ್ಲಿಸಲು ಹಾಗೂ ಅಭಿನಯ ಮಾಡಿ ತೋರಿಸಬೇಕಾಗಿರುತ್ತದೆ. ವೃತ್ತಸಭೆ, ತಾಯಂದಿರ ಸಭೆ ಮತ್ತು ಮನೆ ಭೇಟಿ ನಿರ್ವಹಿಸಬೇಕಾಗಿರುತ್ತದೆ. ಆದ ಕಾರಣ ಕಿವುಡರು ಮತ್ತು ಮೂಕರು, ಕುರುಡರು, ಬುದ್ದಿ ಮಾಂದ್ಯರು, ಮಾನಸಿಕ ಅಸ್ವಸ್ಥರು ಕಾರ್ಯಕರ್ತೆ ಹುದ್ದೆಗೆ ಅರ್ಹರಲ್ಲ.

ಈ) ಅಂಗನವಾಡಿ ಸಹಾಯಕಿಯ ಹುದ್ದೆಯಲ್ಲಿ ಅಂಗನವಾಡಿ ಫಲಾನುಭವಿಗಳಿಗೆ ಪೂರಕ ಪೌಷ್ಟಿಕ ಆಹಾರವನ್ನು ಬೇಯಿಸಿ/ಸಿದ್ಧಪಡಿಸಿ ಉಣಬಡಿಸುವುದು, ಕೇಂದ್ರವನ್ನು ಸ್ವಚ್ಛಗೊಳಿಸುವುದು, ಮಕ್ಕಳನ್ನು ಅವರ ಮನೆಗಳಿಂದ ಕೇಂದ್ರಕ್ಕೆ ಕರೆತರುವುದು ಹಾಗೂ ಕಾರ್ಯಕರ್ತೆಯು ವೃತ್ತಸಭೆ, ತಾಯಂದಿರ ಸಭೆ ಮತ್ತು ಮನೆ ಭೇಟಿಗೆ ಹೋದಾಗ ಅಂಗನವಾಡಿ ಕೇಂದ್ರದ ಜವಾಬ್ದಾರಿಯನ್ನು ನಿರ್ವಹಿಸಬೇಕು. ಆದ್ದರಿಂದ ಸಹಾಯಕಿ ಹುದ್ದೆಗೆ ಅಂಗವಿಕಲ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಅವಕಾಶವಿರುವುದಿಲ್ಲ.

ಉ) ಇತರೆ ದೈಹಿಕ ಅಂಗವೈಕಲ್ಯತೆ ಶೇ.60 ಮೀರದಂತೆ ಇರುವವರು ಅರ್ಜಿ ಸಲ್ಲಿಸಬಹುದಾಗಿದೆ. ಅಂಗೀಕೃತ ಪ್ರಾಧಿಕಾರ(ಜಿಲ್ಲಾ ವೈದ್ಯಕೀಯ ಮಂಡಳಿ)ಯಿಂದ ಪಡೆದ ಪ್ರಮಾಣ ಪತ್ರವನ್ನು ಅರ್ಜಿಯೊಂದಿಗೆ ಹಾಜರುಪಡಿಸಬೇಕು.

ಊ) ಅಂಗವಿಕಲ ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ಸಂದರ್ಭದಲ್ಲಿ ಅಂಗವಿಕಲತೆಯ ಪ್ರಮಾಣದ ಬಗ್ಗೆ ಸಂಶಯ ಉಂಟಾದಲ್ಲಿ ಆ ಅಭ್ಯರ್ಥಿಯನ್ನು ಆಯ್ಕೆ ಸಮಿತಿಯ ಮುಂದೆ ಖುದ್ದು ಹಾಜರಾಗಲು ಸೂಚಿಸಿ ಸದರಿ ಹುದ್ದೆ ನಿರ್ವಹಿಸಲು ಸಮರ್ಥರಿರುವ ಬಗ್ಗೆ ಸಮಿತಿಯೇ ಪರಿಶೀಲಿಸಿ ನಿರ್ಧರಿಸತಕ್ಕದ್ದು.

ಋ) ಒಂದೇ ಹುದ್ದೆಗೆ ಇಬ್ಬರು ಅಂಗವಿಕಲರು ಅರ್ಜಿ ಸಲ್ಲಿಸಿದ್ದಲ್ಲಿ ಗರಿಷ್ಠ ಅಂಕ ಪಡೆದವರನ್ನು ಆಯ್ಕೆ ಮಾಡಬಹುದಾಗಿದೆ.

ಎ) ಅಂಗನವಾಡಿ ಕಾರ್ಯಕರ್ತೆಯರ ನೇಮಕಾತಿಗಳಲ್ಲಿ ವಿಕಲಚೇತನರಿಗೆ 10 ವರ್ಷ ವಯೋಮಿತಿ ಸಡಿಲಿಕೆ ಮಾಡಲಾಗಿದೆ.

## IV) ಬೋನಸ್ ಅಂಕಗಳು:- (ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರಿಗೆ)

1) ಮಾಜಿ ದೇವದಾಸಿಯ ಮಗಳು

2) ಯೋಜನಾ ನಿರಾಶ್ರಿತರು

3) ವಿಚ್ಛೇದಿತ ಮಹಿಳೆಯರುಪ

4) ಪರಿತ್ಯಕ್ತೆಯರು

ಹೆಚ್ಚಿನ 5 ಬೋನಸ್ ಅಂಕಗಳಿಗೆ ಅರ್ಹರಾಗಿರುತ್ತಾರೆ. ಪ್ರತಿ ವಿನಾಯಿತಿಗೂ 5 ಬೋನಸ್ ಅಂಕ ನೀಡುವುದು, ಅದರೆ ಯಾವುದೇ ಕಾರಣಕ್ಕೂ ಅವರು ವಿದ್ಯಾರ್ಹತೆಯಲ್ಲಿ ಗಳಿಸಿದ ಅಂಕಕ್ಕೆ ಶೇಕಡಾ 5(5%) ಅಂಕ ನೀಡುವಂತಿಲ್ಲ. ಉದಾ: ಒಬ್ಬ ಅಭ್ಯರ್ಥಿಯು ನಿರಾಶ್ರಿತರು, ಪರಿತ್ಯಕ್ತೆ, ಮಾಜಿ ದೇವದಾಸಿ, ವಿಚ್ಛೇದಿತರು ಆಗಿದ್ದಲ್ಲಿ ಪ್ರತಿ ವಿನಾಯಿತಿಗೂ 5 ಬೋನಸ್ ಅಂಕಗಳನ್ನು ನೀಡುವುದು. ಅಂದರೆ ಸದರಿಯವರು ನಿಗದಿತ ವಿದ್ಯಾರ್ಹತೆಯಲ್ಲಿ ಗಳಿಸಿದ ಅಂಕಗಳಿಗೆ ಮಾಜಿ ದೇವದಾಸಿಯರ ಅವಿವಾಹಿತ ಹೆಣ್ಣು ಮಕ್ಕಳು+5, ಯೋಜನಾ ನಿರಾಶ್ರಿತರು+5, ವಿಚ್ಛೇದಿತ ಮಹಿಳೆಯರು+5, ಪರಿತ್ಯಕ್ತೆಯರು+5, ಒಟ್ಟು 20 ಬೋನಸ್ ಅಂಕಗಳನ್ನು ನೀಡುವುದು. ಬೋನಸ್ ಅಂಕ ಪಡೆಯಲು ಸಂಬಂಧಿತ ದಾಖಲೆಗಳನ್ನು ಅರ್ಜಿಯೊಂದಿಗೆ ಲಗತ್ತಿಸಬೇಕಾಗಿರುವುದು ಕಡ್ಡಾಯ.

## V) ಆನ್‌ಲೈನ್ ಅರ್ಜಿಯೊಂದಿಗೆ ಲಗತ್ತಿಸಬೇಕಾದ ದಾಖಲೆಗಳು:

1. ಅರ್ಜಿ ನಿಗದಿತ ನಮೂನೆಯಲ್ಲಿ. (ಆನ್ ಲೈನ್)
2. ಜನನ ಪ್ರಮಾಣ ಪತ್ರ/ಜನ್ಮ ದಿನಾಂಕ ಇರುವ ಎಸ್.ಎಸ್.ಎಲ್.ಸಿ ಅಂಕ ಪಟ್ಟಿ.
3. ನಿಗದಿತ ವಿದ್ಯಾರ್ಹತೆಯ ಅಂಕಪಟ್ಟಿ.
4. ತಹಶೀಲ್ದಾರರು/ಉಪತಹಶೀಲ್ದಾರರಿಂದ ಪಡೆದ ಒಂದು(1) ವರ್ಷದೊಳಗಿನ ವಾಸಸ್ಥಳ ದೃಢೀಕರಣ ಪತ್ರ.
5. ಅಭ್ಯರ್ಥಿಗಳ ಜಾತಿ ಪ್ರಮಾಣ ಪತ್ರ.
6. ಪತಿಯ ಮರಣ ಪ್ರಮಾಣ ಪತ್ರ. (ವಿಧವಾ ವೇತನದ ದೃಢೀಕರಣವನ್ನು ಪರಿಗಣಿಸುವಂತಿಲ್ಲ)
7. ಆತ್ಮಹತ್ಯೆ ಮಾಡಿಕೊಂಡ ರೈತರ ಪತ್ನಿ ಎಂದು ಉಪವಿಭಾಗಾಧಿಕಾರಿಗಳಿಂದ ಪಡೆದ ಪ್ರಮಾಣ ಪತ್ರ.
8. ಅಂಗವಿಕಲತೆ ಪ್ರಮಾಣ ಪತ್ರ. (ಅಂಗವಿಕಲ ವೇತನದ ದೃಢೀಕರಣವನ್ನು ಪರಿಗಣಿಸುವಂತಿಲ್ಲ)
9. ವಿಚ್ಛೇಧನ ಪ್ರಮಾಣ ಪತ್ರ. (ನ್ಯಾಯಾಲಯದಿಂದ ಪಡೆದಿರಬೇಕು)
10. ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ವತಿಯಿಂದ ನಡೆಸಲ್ಪಟ್ಟ ಮಾಜಿ ದೇವದಾಸಿಯರ ಸಮೀಕ್ಷೆಯ ಪಟ್ಟಿಯಲ್ಲಿರುವ ಮಾಜಿ ದೇವದಾಸಿಯರ ಮಕ್ಕಳು ಎಂಬುದರ ಬಗ್ಗೆ ಮಹಿಳಾ ಅಭಿವೃದ್ಧಿ ನಿಗಮದ ಅಧಿಕಾರಿಗಳಿಂದ ಪ್ರಮಾಣ ಪತ್ರ.
11. ಪರಿತ್ಯಕ್ತೆ ಬಗ್ಗೆ ಗ್ರಾಮ ಪಂಚಾಯತ್‌ನಿಂದ ಪಡೆದ ಪ್ರಮಾಣ ಪತ್ರ.
12. ಇಲಾಖೆಯ ಸುಧಾರಣಾ ಸಂಸ್ಥೆ/ರಾಜ್ಯ ಮಹಿಳಾ ನಿಲಯಗಳ ನಿವಾಸಿ ಬಗ್ಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳಿಂದ ಪಡೆದ ಪ್ರಮಾಣ ಪತ್ರ.
13. ಯೋಜನಾ ನಿರಾಶ್ರಿತರ ಬಗ್ಗೆ ತಹಶೀಲ್ದಾರರಿಂದ ಪಡೆದ ಪ್ರಮಾಣ ಪತ್ರ.

ಉಪನಿರ್ದೇಶಕರು
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
ಮಂಗಳೂರು
20/9/18